# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 766

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಕಿಶೋರ್ ಕುಮಾರ್ ಪುತ್ತೂರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 16.12.2024

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ದಿನಾಂಕ:01.06.2023ರ ನಂತರ ಈವರೆಗೂ ವಿತರಿಸಲಾದ ಮತ್ತು ರದ್ದುಪಡಿಸಲಾದ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಚೀಟಿಗಳೆಷ್ಟು; ಈ ಪಡಿತರ ಚೀಟಿಗಳನ್ನು ರದ್ದುಪಡಿಸಲು ಕಾರಣಗಳೇನು; (ತಾಲ್ಲೂಕುವಾರು ಅಂಕಿ ಅಂಶ ನೀಡುವುದು) | ಉಡುಪಿ ಜಿಲ್ಲೆಯಲ್ಲಿ ಜೂನ್ 2023 ರಿಂದ ಈವರೆವಿಗೂ ವಿತರಿಸಲಾದ ಪಡಿತರ ಚೀಟಿಗಳ ತಾಲ್ಲೂಕುವಾರು ವಿವರ ಈ ಕೆಳಕಂಡಂತಿರುತ್ತವೆ:- |

| ತಾಲ್ಲೂಕಿನ ಹೆಸರು | ಆದ್ಯತಾ ಪಡಿತರ ಚೀಟಿ | ಆದ್ಯತೇತರ ಪಡಿತರ ಚೀಟಿ | ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳಾಗಿ ಪರಿವರ್ತಿಸಲಾಗಿರುವ ಪಡಿತರ ಚೀಟಿಗಳು |
|---|---|---|---|
| ಕಾರ್ಕಳ | 540 | 17 | 76 |
| ಕುಂದಾಪುರ | 519 | 335 | 170 |
| ಉಡುಪಿ | 821 | 20 | 51 |
| ಕಾಪು | 601 | 92 | 131 |
| ಬ್ರಹ್ಮಾವರ | 551 | 121 | 40 |
| ಬೈಂದೂರು | 667 | 31 | 16 |
| ಹೆಬ್ರಿ | 155 | 07 | 25 |
| ಒಟ್ಟು | 3854 | 623 | 509 |

<table>
<tr>
<td></td>
<td></td>
<td>
ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜೂನ್ 2023 ರಿಂದ ಈವರೆವಿಗೂ ವಿತರಿಸಲಾದ, ಹಾಗೂ ಅಮಾನತ್ತುಪಡಿಸಲಾದ ಮತ್ತು ರದ್ದುಪಡಿಸಲಾದ ಆದ್ಯತೇತರ ಪಡಿತರ ಚೀಟಿಗಳ ತಾಲ್ಲೂಕುವಾರು ವಿವರ ಈ ಕೆಳಕಂಡಂತಿರುತ್ತವೆ:-
<table>
<tr><th>ತಾಲ್ಲೂಕಿನ ಹೆಸರು</th><th>ಆದ್ಯತಾ ಪಡಿತರ ಚೀಟಿಗಳು</th><th>ಅಮಾನತ್ತಿರುವ ಆದ್ಯತಾ ಪಡಿತರ ಚೀಟಿಗಳು</th><th>ರದ್ದುಪಡಿಸಲಾದ ಆದ್ಯತೇತರ ಪಡಿತರ ಚೀಟಿಗಳು</th></tr>
<tr><td>ಬೆಳ್ತಂಗಡಿ</td><td>851</td><td>08</td><td>1230</td></tr>
<tr><td>ಬಂಟವಾಳ</td><td>927</td><td>38</td><td>477</td></tr>
<tr><td>ಮಂಗಳೂರು</td><td>1404</td><td>19</td><td>150</td></tr>
<tr><td>ಪುತ್ತೂರು</td><td>488</td><td>23</td><td>508</td></tr>
<tr><td>ಸುಳ್ಯ</td><td>220</td><td>17</td><td>47</td></tr>
<tr><td>ಮೂಡಬಿದ್ರಿ</td><td>507</td><td>29</td><td>328</td></tr>
<tr><td>ಕಡಬಾ</td><td>284</td><td>01</td><td>273</td></tr>
<tr><td>ಮುಲ್ಕಿ</td><td>245</td><td>169</td><td>0</td></tr>
<tr><td>ಉಲ್ಲಾಳ</td><td>606</td><td>38</td><td>21</td></tr>
<tr><td>ಒಟ್ಟು</td><td>5532</td><td>340</td><td>3034</td></tr>
</table>
</td>
</tr>
<tr>
<td>ಆ</td>
<td>ಬಿ.ಪಿ.ಎಲ್ ಪಡಿತರಚೀಟಿ ಪಡೆಯಲು ಇರಬೇಕಾದ ಅರ್ಹತೆಗಳೇನು;</td>
<td>
ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>
• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ನಿಗಮಗಳು /ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>
• ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ
</td>
</tr>
</table>

| | | |
|---|---|---|
| | | ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು. |
| ಇ | ಪಡಿತರಚೀಟಿಗೆ ಹೆಸರು ಸೇರ್ಪಡೆ ಮತ್ತು ತಿದ್ದುಪಡಿಗೆ ಅವಕಾಶ ನೀಡದೆ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೆಸರು ಸೇರ್ಪಡೆಗೆ ಯಾವಾಗ ಅವಕಾಶ ನೀಡಲಾಗುವುದು? | ಪ್ರಸ್ತುತ ಆಹಾರ ಇಲಾಖೆಯಲ್ಲಿ ಬಳಸಲಾಗುತ್ತಿರುವ ಸರ್ವರ್ ಹಳೆಯದಾಗಿದ್ದು, ಈ ಕಾರಣದಿಂದಾಗಿ ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ (Karnataka State Data Centre) ಗೆ ಆಹಾರ ತಂತ್ರಾಂಶದ Migration ಕಾರ್ಯವು ಅಂತಿಮ ಹಂತದಲ್ಲಿದ್ದು, ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ 'ಗೆ Migration ಕಾರ್ಯ ಪೂರ್ಣಗೊಂಡ ನಂತರ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ/ ಪಡಿತರ ಚೀಟಿ ತಿದ್ದುಪಡಿ ಮಾಡುವ ಪ್ರಕ್ರಿಯೆ ನಿರಂತರವಾಗಿರುತ್ತದೆ.<br>ತುರ್ತು ವೈದ್ಯಕೀಯ ಪರಿಸ್ಥಿತಿ ಇರುವ ಅರ್ಹ ಫಲಾನುಭವಿಗಳಿಗೆ, ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ, ಬುಡಕಟ್ಟು ಜನಾಂಗದವರಿಗೆ, ಹೊಸ ಆದ್ಯತಾ ಪಡಿತರ ಚೀಟಿ ನೀಡಲಾಗುತ್ತಿದೆ. ಹಾಗೂ ಪಡಿತರ ಚೀಟಿಯಲ್ಲಿನ ತಿದ್ದುಪಡಿಗೆ ಈ ಹಿಂದೆ ಪ್ರತಿ ತಿಂಗಳು 1 ರಿಂದ 10ನೇ ತಾರೀಖಿನವರೆವಿಗೂ ಅವಕಾಶವನ್ನು ಕಲ್ಪಿಸಲಾಗಿದ್ದು, ಡಿಸೆಂಬರ್ 2024ರ ಮಾಹೆಯಲ್ಲಿ ತಿಂಗಳ ಪೂರ್ತಿ ಪಡಿತರ ಚೀಟಿ ತಿದ್ದುಪಡಿಗೆ ಅವಕಾಶವನ್ನು ಕಲ್ಪಿಸಲಾಗಿರುತ್ತದೆ. |

ಆನಾಸ 400 ಡಿಆರ್ಎ 2024

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು